**All India Radio: Bangalore**
**Regional Bulletin In Kannada**
**22.07.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**22.07.2025 / 2.30 p.m.**

**<><><><>**

**ಮುಖ್ಯಾಂಶಗಳು**

- **ಭೂಕುಸಿತ, ಕಡಲು ಕೊರೆತ ತಡೆಗೆ ೮೦೦ ಕೋಟಿ ರೂಪಾಯಿ ಅನುದಾನ - ಕಂದಾಯ ಸಚಿವ ಕೃಷ್ಣ ಬೈರೇಗೌಡ**

- **ಶಾಸಕರಿಗೆ ಒಟ್ಟು ೭ ಸಾವಿರದ ೪೫೫ ಕೋಟಿ ರೂಪಾಯಿ ಅನುದಾನ ನೀಡಲು ಸರ್ಕಾರ ತೀರ್ಮಾನ**

- **ದೇಶಾದ್ಯಂತ ಶೀಘ್ರವೇ ಜಾತಿ ಗಣತಿ ಆರಂಭ : ದಾವಣಗೆರೆ ವೀರಶೈವ ಶೃಂಗಸಮ್ಮೇಳನದಲ್ಲಿ ಕೇಂದ್ರ ಸಚಿವ ಸೋಮಣ್ಣ ಭರವಸೆ**

- **ಚಿಕ್ಕಮಗಳೂರು ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಲೈಂಗಿಕ ದೌರ್ಜನ್ಯ ತಡೆಗೆ ಭದ್ರಬಾಲ್ಯ ವಿನೂತನ ಯೋಜನೆ ಜಾರಿ**

<><><><>

ಭೂಕುಸಿತ, ಕಡಲು ಕೊರೆತ ಸಮಸ್ಯೆ ಎದುರಿಸುತ್ತಿರುವ ಉತ್ತರ ಕನ್ನಡ ಸೇರಿದಂತೆ ಉಳಿದ ಜಿಲ್ಲೆಗಳಲ್ಲಿ ತುರ್ತು ಕಾಮಗಾರಿ ಕೈಗೊಳ್ಳಲು ೮೦೦ ಕೋಟಿ ರೂಪಾಯಿ ಅನುದಾನಕ್ಕೆ ಶೀಘ್ರವೇ ಅನುಮೋದನೆ ನೀಡಲಾಗುವುದು ಎಂದು ರಾಜ್ಯ ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಕುಮಟಾದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ೬ ಜಿಲ್ಲೆಗಳಲ್ಲಿ ಭೂಕುಸಿತ ಸಮಸ್ಯೆ ತೀವ್ರವಾಗಿದೆ. ತಡೆಗೋಡೆ ನಿರ್ಮಿಸುವ ಕೆಲಸ ನಡೆಯಬೇಕಿದ್ದು, ಇದಕ್ಕಾಗಿ ೫೦೦ ಕೋಟಿ ರೂಪಾಯಿ ಮೀಸಲಿಡಲಾಗುತ್ತಿದೆ. ಕರಾವಳಿಯ ಮೂರು ಜಿಲ್ಲೆಗಳಲ್ಲಿ ಕಡಲು ಕೊರೆತ ಸಮಸ್ಯೆ ತಡೆಗೆ ೩೦೦ ಕೋಟಿ ರೂಪಾಯಿ ನೀಡಲಾಗುವುದು ಎಂದು ಹೇಳಿದ್ದಾರೆ.

ಪ್ರಕೃತಿ ವಿಕೋಪ ತಡೆಗೆ ಕೇಂದ್ರ ಸರ್ಕಾರದ ಹಣಕಾಸು ಇಲಾಖೆಯಿಂದ ಅನುದಾನ ಬಿಡುಗಡೆಯಾಗಲು ವಿಳಂಬವಾಗಿದ್ದು, ಕೇಂದ್ರಕ್ಕೆ ಪತ್ರ ಬರೆಯಲಾಗಿದೆ ಎಂದು ತಿಳಿಸಿದ್ದಾರೆ. ಮುಂದಿನ ೬ ತಿಂಗಳ ಒಳಗೆ ಎಲ್ಲ ಕಂದಾಯ ದಾಖಲೆಗಳನ್ನು ಗಣಕೀಕರಣ ಮಾಡುವ ಗುರಿ ಹೊಂದಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಶಿರಸಿ ತಾಲ್ಲೂಕಿನ ಬೆಣ್ಣೆಹೊಳೆ ಸೇತುವೆ, ಭೂಕುಸಿತ ಸಂಭವಿಸಿರುವ ಕುಮಟಾ ತಾಲ್ಲೂಕಿನ ದೇವಿಮನೆ ಘಟ್ಟ ಪ್ರದೇಶದಲ್ಲಿ ಸಚಿವರು ಪರಿಶೀಲನೆ ನಡೆಸಿದರು. ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ, ಶಾಸಕರಾದ ಭೀಮಣ್ಣ ನಾಯ್ಕ, ದಿನಕರ ಶೆಟ್ಟಿ ಈ ಸಂದರ್ಭದಲ್ಲಿ ಹಾಜರಿದ್ದರು.

<><><><>

ಶಾಸಕರಿಗೆ ೭ ಸಾವಿರದ ೪೫೫ ಕೋಟಿ ರೂಪಾಯಿ ವಿಶೇಷ ಅನುದಾನ ನೀಡಲಾಗುತ್ತಿದೆ ಎಂದು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಬೆಂಗಳೂರಿನ ಶಾಸಕರನ್ನು ಹೊರತುಪಡಿಸಿ ೧೯೬ ಶಾಸಕರಿಗೆ ವಿಶೇಷ ಅನುದಾನ ಅನ್ವಯವಾಗಲಿದೆ ಎಂದು ಹೇಳಿದ್ದಾರೆ. ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಗೂ ವಿಶೇಷ ಅನುದಾನ ಬರುವುದರಿಂದ ಅಲ್ಲಿನ ೪೧ ಶಾಸಕರಿಗೆ ೨೫ ಕೋಟಿ ವಿಶೇಷ ಅನುದಾನ ನೀಡಲು ನಿರ್ಧರಿಸಲಾಗಿದೆ. ವಿಪಕ್ಷದ ೬೮ ಶಾಸಕರಿಗೆ ತಲಾ ೨೫ ಕೋಟಿ, ಇನ್ನುಳಿದ ೧೦೧ ಕಾಂಗ್ರೆಸ್ ಶಾಸಕರಿಗೆ ತಲಾ ೫೦ ಕೋಟಿ ಅನುದಾನ ನೀಡಲಾಗುವುದು ಎಂದು ಹೇಳಿದ್ದಾರೆ. ಅನುದಾನ ಹಂಚಿಕೆಯ ವಿಚಾರದಲ್ಲಿ ತಾರತಮ್ಯ ಮಾಡಲಾಗುತ್ತಿದೆ ಎಂಬ ಆರೋಪವನ್ನು ಬಸವರಾಜ ರಾಯರೆಡ್ಡಿ ತಳ್ಳಿ ಹಾಕಿದ್ದಾರೆ.

**ಧ್ವನಿ : ರಾಯರೆಡ್ಡಿ (೨೭ ಸೆಕೆಂಡ್‌ಗಳು)**

<><><><>

ದೇಶಾದ್ಯಂತ ಶೀಘ್ರದಲ್ಲೇ ಜಾತಿ ಗಣತಿ ಆರಂಭವಾಗಲಿದೆ ಎಂದು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ನಡೆಯುತ್ತಿರುವ ವೀರಶೈವ ಪೀಠಾಚಾರ್ಯರು ಹಾಗೂ ಶಿವಾಚಾರ್ಯರ ಶೃಂಗ ಸಮ್ಮೇಳನದ ಎರಡನೆ ದಿನದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೇಶಾದ್ಯಂತ ಜನ ಗಣತಿ ಮತ್ತು ಜಾತಿ ಗಣತಿ ಕಾರ್ಯವನ್ನು ಕೇಂದ್ರ ಸರ್ಕಾರ ಅತ್ಯಂತ ವ್ಯವಸ್ಥಿತವಾಗಿ ಮಾಡಲಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಅಂದಾಜು ಮೂರು ಸಾವಿರ ಮಠ, ಪೀಠಗಳಿದ್ದು, ಎಲ್ಲವೂ ನಾಡಿನ ಅಭಿವೃದ್ಧಿಗೆ ಒಂದಲ್ಲ ಒಂದು ರೀತಿಯ ಸೇವೆ ಸಲ್ಲಿಸುತ್ತಿವೆ ಎಂದು ತಿಳಿಸಿದ್ದಾರೆ. ಶ್ರೀ ಶೈಲ, ಉಜ್ಜಯಿನಿ, ಕೇದಾರ, ಬಾಳೆಹೊನ್ನೂರು

ಮತ್ತು ಕಾಶಿ ಪೀಠದ ಶ್ರೀಗಳು ಸೇರಿದಂತೆ ನಾಡಿನ ವಿವಿಧ ಮಠ ಮಾನ್ಯಗಳ ಪೀಠಾಧಿಪತಿಗಳು ಸಮ್ಮೇಳನದಲ್ಲಿ ಭಾಗವಹಿಸಿದ್ದರು.

<><><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಬಾಲ್ಯ ವಿವಾಹ ತಡೆಗಟ್ಟಲು ಹಾಗೂ ಮಹಿಳೆಯರು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆಯಲು ಭದ್ರ ಬಾಲ್ಯ ಎಂಬ ವಿನೂತನ ಕಾರ್ಯಕ್ರಮ ಜಾರಿಗೊಳಿಸಲಾಗಿದೆ. ಇದು ರಾಜ್ಯದಲ್ಲಿಯೇ ಮೊದಲ ಪ್ರಯೋಗವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಎಸ್ ಕೀರ್ತನಾ ತಿಳಿಸಿದ್ದಾರೆ. ಈ ನೂತನ ಯೋಜನೆಯಲ್ಲಿ ಹಲವಾರು ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರಲ್ಲಿ, ಶಾಲಾ ಮಕ್ಕಳಲ್ಲಿ ಹಾಗೂ ಪೋಷಕರಲ್ಲಿ ಅರಿವು ಮೂಡಿಸುವ ಕೆಲಸ ಮಾಡಲಾಗುವುದು. ಪ್ರಮುಖವಾಗಿ ಎಲ್ಲಾ ಶಾಲೆಗಳಲ್ಲಿ ವಿಶ್ವಾಸ ಪೆಟ್ಟಿಗೆ ಎಂಬ ಪೆಟ್ಟಿಗೆ ಇರಿಸಲಾಗುತಿದ್ದು ಮಕ್ಕಳು ತಮ್ಮ ಸಮಸ್ಯೆ, ಪ್ರಶ್ನೆಗಳನ್ನು ಬರೆದು ಇದರಲ್ಲಿ ಹಾಕಬಹುದು. ಇದನ್ನು ೧೫ ದಿನಕೊಮ್ಮೆ ತೆರೆದು ಮಕ್ಕಳ ಪ್ರಶ್ನೆಗಳಿಗೆ ಉತ್ತರಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ಬಾಲ್ಯ ವಿವಾಹದ ಬಗ್ಗೆಯೂ ಪಂಚಾಯಿತಿ ಮಟ್ಟದಲ್ಲಿ ಜಾಗೃತಿ ಮೂಡಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ : ಹೆಚ್. ಎಸ್ ಕೀರ್ತನಾ. ಜಿಲ್ಲ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ.**

<><><>

ಸ್ವಾತಂತ್ರ್ಯ ದಿನಾಚರಣೆಗೆ ಎಲ್ಲಾ ರೀತಿಯ ಸಿದ್ದತೆಗಳನ್ನು ಮಾಡಿಕೊಳ್ಳುವಂತೆ ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ರಾಜ್ಯಮಟ್ಟದ ಸ್ವಾತಂತ್ರ್ಯ ದಿನಾಚರಣೆ ಆಚರಿಸುವ ಸಂಬಂಧ ಇಂದು ನಡೆದ ಪೂರ್ವಭಾವಿ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಕಾರ್ಯಕ್ರಮ ಯಶಸ್ವಿಯಾಗಿ ನಡೆಸುವ ಸಂಬಂಧ ಆಯಾ ಇಲಾಖೆಗಳಿಗೆ ನೀಡಿರುವ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸುವಂತೆ ತಿಳಿಸಿದ್ದಾರೆ.

<><><>

ಪರಿಶಿಷ್ಟ ಸಮುದಾಯ ಹಾಗೂ ಮಹಿಳಾ ಉದ್ದಿಮೆದಾರರನ್ನು ಉತ್ತೇಜಿಸುವ 'ಸ್ಟ್ಯಾಂಡ್ ಅಪ್ ಇಂಡಿಯಾ' ಯೋಜನೆಯಡಿ ಕೇಂದ್ರ ಸರ್ಕಾರ ದೇಶದಲ್ಲೇ ಕರ್ನಾಟಕ ರಾಜ್ಯಕ್ಕೆ ಅತಿಹೆಚ್ಚಿನ ಸಾಲದ ನೆರವು ನೀಡಿದೆ. ಈ ಯೋಜನೆಯಡಿ ೨೦೧೮ ರಿಂದ ಈಚೆಗೆ ಒಟ್ಟು ೨ ಸಾವಿರದ ೯೪೬ ಕೋಟಿ ರೂಪಾಯಿ ಬ್ಯಾಂಕ್ ಸಾಲವನ್ನು ಮಂಜೂರು ಮಾಡಲಾಗಿದ್ದು, ಆ ಮೂಲಕ ಸ್ಟ್ಯಾಂಡ್ ಅಪ್ ಇಂಡಿಯಾ ಯೋಜನೆ ಫಲಾನುಭವಿಗಳ ಪಟ್ಟಿಯಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ. ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಲೋಕಸಭೆಯಲ್ಲಿ ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆಗೆ

ಹಣಕಾಸು ಖಾತೆಯ ರಾಜ್ಯ ಸಚಿವ ಪಂಕಜ್ ಚೌಧರಿ ನೀಡಿರುವ ಲಿಖಿತ ಉತ್ತರದಲ್ಲಿ ಈ ವಿವರ ನೀಡಿದ್ದಾರೆ.

<><><><>

ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ನಟ ದರ್ಶನ್ ಸಲ್ಲಿಸಿದ್ದ ಜಾಮೀನು ಅರ್ಜಿಯ ವಿಚಾರಣೆಯನ್ನು ಸುಪ್ರೀಂಕೋರ್ಟ್ ಇದೇ ೨೪ಕ್ಕೆ ಮುಂದೂಡಿದೆ. ಹೀಗಾಗಿ ಗುರುವಾರ ದರ್ಶನ್ ಜಾಮೀನು ಭವಿಷ್ಯ ನಿರ್ಧಾರವಾಗಲಿದೆ. ಇಂದು ದರ್ಶನ್ ಪರ ಹಿರಿಯ ವಕೀಲ ಕಪಿಲ್ ಸಿಬಲ್, ವಾದ ಮಂಡಿಸದ ಹಿನ್ನೆಲೆಯಲ್ಲಿ ಸಿದ್ಧಾರ್ಥ್ ದಾವೆ, ವಾದ ಮಂಡಿಸಿದರು. ಮುಂದಿನ ವಿಚಾರಣೆ ವೇಳೆ ಲಿಖಿತ ರೂಪದಲ್ಲಿ ವಾದ ಮಂಡಿಸಲು ಸರ್ವೋಚ್ಚ ನ್ಯಾಯಾಲಯ ಸೂಚಿಸಿದೆ.

<><><><>

ಮೂರು ವರ್ಷಗಳ ಬಳಿಕ ಮುಂಬರುವ ರಣಜಿ ಋತುವಿಗೆ ಮತ್ತೆ ಕರ್ನಾಟಕ ತಂಡಕ್ಕೆ ಮರಳಲು ಬ್ಯಾಟರ್ ಕರುಣ್ ನಾಯರ್ ಸಜ್ಜಾಗಿದ್ದಾರೆ. ೨೦೨೧-೨೨ ರಲ್ಲಿ ಕರ್ನಾಟಕ ತಂಡದಿಂದ ಹೊರಗುಳಿದಿದ್ದ ಅವರು, ವಿದರ್ಭ ತಂಡವನ್ನು ಸೇರಿ ರಣಜಿ ಟ್ರೋಫಿ ಗೆಲ್ಲುವಲ್ಲಿ ವಿದರ್ಭ ತಂಡಕ್ಕೆ ನೆರವಾಗಿದ್ದರು. ಇದೀಗ ಇಂಗ್ಲೆಂಡ್‌ನಲ್ಲಿ ಭಾರತೀಯ ಟೆಸ್ಟ್ ತಂಡದಲ್ಲಿ ಸ್ಥಾನ ಪಡೆದಿರುವ ಅವರು, ವಿದರ್ಭ ಕ್ರಿಕೆಟ್ ಅಸೋಸಿಯೇಷನ್‌ನಿಂದ ನಿರಕ್ಷೇಪಣಾ ಪ್ರಮಾಣಪತ್ರ ಪಡೆದಿದ್ದಾರೆ ಎಂದು ಕ್ರಿಕ್‌ಇನ್ಫೋ ವರದಿ ಮಾಡಿದೆ.

<><><><>

ರಾತ್ರಿ ಊಟ ಮಾಡಿ ಮಲಗಿದ್ದ ಒಂದೇ ಕುಟುಂಬದ ಮೂವರು ಹೊಟ್ಟೆ ನೋವಿನಿಂದ ನರಳಿ ಸಾವನಪ್ಪಿದ ಹೃದಯವಿದ್ರಾವಕ ಘಟನೆ ರಾಯಚೂರು ಜಿಲ್ಲೆ ಸಿರವಾರ ತಾಲೂಕಿನ ಕೆ. ತಿಮ್ಮಾಪುರದಲ್ಲಿ ನಡೆದಿದೆ. ಅಸ್ವಸ್ಥಗೊಂಡ ೬ ಮಂದಿಯ ಪೈಕಿ ಮೂವರಿಗೆ ಚಿಕಿತ್ಸೆ ಮುಂದುವರೆದಿದೆ. ಬೆಂಗಳೂರಿನಲ್ಲಿ ವಾಸವಿದ್ದ ರಮೇಶ್ ಕುಟುಂಬ ೪ ದಿನಗಳ ಹಿಂದೆ ರಾಯಚೂರಿನ ಸ್ವಗ್ರಾಮಕ್ಕೆ ಮರಳಿತ್ತು.

<><><><>

ರೋಗಿಗಳಿಗೆ ರಕ್ತನಿಧಿ ಕೇಂದ್ರಗಳು ಶೀಘ್ರವೇ ಸ್ಪಂದಿಸಿ ಕಾರ್ಯನಿರ್ವಹಿಸುವಂತೆ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಸೂಚಿಸಿದ್ದಾರೆ. ಮಿಮ್ಸ್ ವೈದ್ಯರೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ರಕ್ತನಿಧಿ ಕೇಂದ್ರ ಸಮರ್ಪಕವಾಗಿ ಕಾರ್ಯನಿರ್ವಹಿಸದಿದ್ದರೆ, ರೋಗಿಗಳು ಜೀವ ಕಳೆದುಕೊಳ್ಳುವ ಪರಿಸ್ಥಿತಿ ಉಂಟಾಗಬಹುದು ಎಂದು ಹೇಳಿದ್ದಾರೆ. ಮಿಮ್ಸ್ ನ ರಕ್ತ ನಿಧಿ ಕೇಂದ್ರ ಸರಿಯಾಗಿ ಕಾರ್ಯನಿರ್ವಹಿಸದಿದ್ದರೆ ರಕ್ತಕ್ಕೆ ಕೃತಕ ಬೇಡಿಕೆ ಸೃಷ್ಟಿಯಾಗಿ ಹಲವಾರು ತೊಂದರೆ

ಉಂಟಾಗಲಿದೆ. ಪರಿಸ್ಥಿತಿ ಅರ್ಥಮಾಡಿಕೊಂಡು ವೈದ್ಯರು ಹಾಗೂ ಸಿಬ್ಬಂದಿ ಸಮನ್ವಯದಿಂದ ಕಾರ್ಯನಿರ್ವಹಿಸುವಂತೆ ನಿರ್ದೇಶನ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>